# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20ನೇ ಸಾಲಿನಲ್ಲಿ ಮುಂದುವರೆಸಿದ ಯೋಜನೆಗಳ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆಗೊಳಿಸುವ ಕುರಿತು.

ಓದಲಾಗಿದೆ:
1. ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂ: ಎಫ್ ಡಿ 01 ಟಿ ಎಫ್ ಪಿ 2019, ದಿ: 03.04.2019.
2. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸರ್ಕಾರದ ಆದೇಶ ಸಂ: ವಾಕೈ 57 ಆಂಆಸ(2) 2019, ದಿ: 16.04.2019.
3. ಸರ್ಕಾರದ ಆದೇಶ ಸಂ: ಸಿಐ 03 ಸಿಎಸ್ ಸಿ 2019, ದಿ: 25.04.2019.
4. ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: ಆಇ 22 ವೆಚ್ಚ-1/2019, ದಿ: 20.06.2019.
5. ತಿದ್ದುಪಡಿ ಆದೇಶ ಸಂ: ಸಿಐ 03 ಸಿಎಸ್ ಸಿ 2019, ದಿ: 22.05.2019.

***************

**ಪ್ರಸ್ತಾವನೆ:**

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2019-20ನೇ ಸಾಲಿನ ಆಯವ್ಯಯದಲ್ಲಿ ಮುಂದುವರೆದ ಯೋಜನೆಗಳೆಂದು ಘೋಷಿಸಿ ವಿವಿಧ ಯೋಜನೆಗಳಿಗೆ ಅನುದಾನವನ್ನು ಒದಗಿಸಿದ್ದು, ಅದರಂತೆ, ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2019-20ನೇ ಸಾಲಿನ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸಣ್ಣ ಪ್ರಮಾಣದ ಕೈಗಾರಿಕೆ ಶಾಖೆಯ ಯೋಜನೆ/ಕಾರ್ಯಕ್ರಮಗಳನ್ನು ಮುಂದುವರೆದ ಯೋಜನೆಗಳೆಂದು ಘೋಷಿಸಲಾಗಿರುತ್ತದೆ.

ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2019-20ನೇ ಸಾಲಿನ ಮುಂದುವರೆದ ಯೋಜನೆಗಳೆಂದು ಘೋಷಿಸಲಾಗಿರುವ ವಿವಿಧ ಯೋಜನೆಗಳಿಗೆ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಈಗಾಗಲೇ ಬಿಡುಗಡೆ ಮಾಡಲಾಗಿರುತ್ತದೆ. ಆದರೆ, ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಆರ್ಥಿಕ ಇಲಾಖೆಯು ಲೆಕ್ಕಶೀರ್ಷಿಕೆ 2851-00-106-0-12 (103) Assistance to coir sector (Tengu Bhaghya) for MSME ಯನ್ನು ಅನುಬಂಧ-1ಎ ರಲ್ಲಿರಿಸಿ ಸದರಿ ಲೆಕ್ಕಶೀರ್ಷಿಕೆಯಡಿ ವರ್ಗೀಕರಿಸಲಾಗಿರುವ ಯೋಜನೆಗಳಿಗೆ ವರ್ಷದ ಯಾವುದೇ ಅವಧಿಯಲ್ಲಾಗಲೀ ಅಥವಾ ಎಷ್ಟೇ ಮೊತ್ತವನ್ನಾಗಲೀ, ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯ ಅನುಮೋದನೆ ಪಡೆಯುವುದು ಕಡ್ಡಾಯವಾಗಿರುತ್ತದೆಂದು ತಿಳಿಸಲಾಗಿರುತ್ತದೆ.

ಮೇಲೆ ಕ್ರಮಾಂಕ (4)ರಲ್ಲಿ ಓದಲಾದ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ 2851-00-106-0-12 (103)-ತೆಂಗುಭಾಗ್ಯ (ಸಾಮಾನ್ಯ) ರಡಿ ಹೊಸ ಯೋಜನೆಯಾದ ಕಲ್ಪವೃಕ್ಷ ಕಾಯಕ ನೀತಿಗೆ ನಿಗದಿಯಾಗಿರುವ ರೂ. 8000.00 ಲಕ್ಷಗಳನ್ನು ಹೊರತುಪಡಿಸಿ ಮುಂದುವರೆದ ಯೋಜನೆಗೆ ಒದಗಿಸಲಾಗಿರುವ ಉಳಿದ ರೂ. 600.00 ಲಕ್ಷಗಳ ಪೈಕಿ ಮೊದಲನೇ ಕಂತಿನ ಅನುದಾನವನ್ನು ಅಂದರೆ ರೂ. 150.00 ಲಕ್ಷಗಳನ್ನು ಮಾತ್ರ ಬಿಡುಗಡೆಗೊಳಿಸಲು ಸಹಮತಿಸಿರುತ್ತದೆ.

ಈ ಕುರಿತು ಸರ್ಕಾರದಲ್ಲಿ ಪರಿಶೀಲಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 20 ಸಿಎಸ್ ಸಿ 2019, ದಿ: 01.07.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನ ಮುಂದುವರೆದ ಯೋಜನೆಯ ಲೆಕ್ಕಶೀರ್ಷಿಕೆ 2851-00-106-0-12 (103)-ತೆಂಗುಭಾಗ್ಯ (ಸಾಮಾನ್ಯ) ರಡಿ ಹೊಸ ಯೋಜನೆಯಾದ ಕಲ್ಪವೃಕ್ಷ ಕಾಯಕ ನೀತಿಗೆ ನಿಗದಿಯಾಗಿರುವ ರೂ. 8000.00 ಲಕ್ಷಗಳನ್ನು ಹೊರತುಪಡಿಸಿ ಮುಂದುವರೆದ ಯೋಜನೆಗೆ ಒದಗಿಸಲಾಗಿರುವ ಉಳಿದ ರೂ. 600.00 ಲಕ್ಷಗಳಲ್ಲಿ ಮೊದಲನೇ ಕಂತಿನ ಅನುದಾನ ರೂ. 150.00 ಲಕ್ಷಗಳನ್ನು (ಒಂದು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಆಯುಕ್ತರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ನಿರ್ದೇಶನಾಲಯ, ಬೆಂಗಳೂರು /

Scanned by CamScanner

ಆಯುಕ್ತರು, ಮಧ್ಯಮ ಮತ್ತು ಮೆಗಾ ಕೈಗಾರಿಕೆ ನಿರ್ದೇಶನಾಲಯ, ಬೆಂಗಳೂರು, ಇವರಿಗೆ ಬಿಡುಗಡೆ ಮಾಡಿ ಮಂಜೂರಾತಿ ನೀಡಲಾಗಿದೆ.

ಈ ಯೋಜನೆಗಳ ಅನುಷ್ಠಾನಕ್ಕಾಗಿ ಈಗಾಗಲೇ ಯೋಜನೆಗಳಿಗೆ ಅನ್ವಯವಾಗುವಂತೆ ರೂಪಿಸಿರುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು. ವಿವಿಧ ಯೋಜನೆಗಳಡಿಯಲ್ಲಿ ಸಾಧಿಸಲಾದ ಭೌತಿಕ ಮತ್ತು ಆರ್ಥಿಕ ಪ್ರಗತಿಯ ವರದಿ ಮತ್ತು ಜಿಲ್ಲಾವಾರು ಫಲಾನುಭವಿಗಳ ವಿವರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಈ ವೆಚ್ಚಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1996 ಹಾಗೂ ಅದರಡಿ ರೂಪಿಸಿರುವ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶದಡಿ ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಉದ್ದೇಶಿತ ಕಾರ್ಯಕ್ರಮಗಳಿಗಲ್ಲದೇ ಇತರೆ ಕಾರ್ಯಕ್ರಮಗಳಿಗೆ ಬಳಸತಕ್ಕದ್ದಲ್ಲ. ಹಣ ವೆಚ್ಚ ಮಾಡಿದ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು (Utilization Certificate) ಕಡ್ಡಾಯವಾಗಿ ಸರ್ಕಾರಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂ: ಎಫ್ ಡಿ 01 ಟಿಎಫ್ ಪಿ 2019, ದಿನಾಂಕ: 03.04.2019 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: ಆಇ 22 ವೆಚ್ಚ-1/2019, ದಿ: 20.06.2019ರನ್ವಯ ಇಲಾಖಾ ಪ್ರಧಾನ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸುಮತಿ ಎಸ್) 1/7/19
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
4. ಆಯುಕ್ತರು, ಎಂ.ಎಸ್.ಎಂ.ಇ., ನಿರ್ದೇಶನಾಲಯ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ವಿ.ಐ.ಟಿ.ಸಿ. ಕಟ್ಟಡ, ಕಸ್ತೂರ್ಬಾ ರಸ್ತೆ, ಬೆಂಗಳೂರು-1.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ, ನಂ.953/ಎ, 2ನೇ ಮೈನ್, 4ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-10.
7. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು-01.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು-01.
9. ಉಪ ನಿರ್ದೇಶಕರು, TNMC, ಖನಿಜ ಭವನ ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.
10. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನಸೌಧ, ಬೆಂಗಳೂರು-01.

10\. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.

11\. ಸರ್ಕಾರದ ಅಧೀನ ಕಾರ್ಯದರ್ಶಿ, (ಸಮನ್ವಯ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01(ಮಲ್ಟಿಗ್ರಾಫ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಕಳುಹಿಸುವ ಸಲುವಾಗಿ)

12\. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner